**<u>ಅಸಲು ದಾವಾ ಸಂಖ್ಯೆ: -207/2021</u>** ಪಿ.ಡಬ್ಲ್ಯೂ.:-4

ದಿನಾಂಕಃ **24.10.2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-</u>

ನನ್ನ ತಂದೆ ಮತ್ತು ವಾದಿಯ ತಂದೆ ಅಣ್ಣ ತಮ್ಮಂದಿರು ಎಂದರೆ ಸರಿ. ವಾದಿ ನನ್ನ ದೊಡ್ಡಪ್ಪನ ಮಗನಾಗಿದ್ದರಿಂದ ನ್ಯಾಯಾಲಯಕ್ಕೆ ಸಾಕ್ಷಿ ಹೇಳಲು ಬಂದಿದ್ದೇನೆ ಎಂದರೆ ಸರಿ. ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಮೂದಾಗಿರುವ ವಿಚಾರಗಳು ನನಗೆ ಗೊತ್ತಿಲ್ಲ. ಪ್ರತಿವಾದಿ ಚಟ್ನಹಳ್ಳಿ ಗ್ರಾಮದ ವಾಸಿ. ಈ ದಿನ ನಾನು ವಾದಿಗೆ ಸೇರಿದ ಸೈಟಿನ ಬಗ್ಗೆ ಸಾಕ್ಷಿ ಹೇಳಲು ಬಂದಿದ್ದೇನೆ. ನಾನು ಮತ್ತು ಮಲ್ಲೇಶಪ್ಪರವರು ಸೈಟಿನಲ್ಲಿದ್ದ 2 ಹುಣಸೇ ಮರಗಳನ್ನು ವಿಭಾಗ ಮಾಡಿಕೊಂಡಿರುತ್ತೇವೆ ಆದರೆ ಅದರ ಬಗ್ಗೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲ. ನಾನು ಮತ್ತು ವಾದಿಯು ದಾವಾ ಆಸ್ತಿಯ ಜೊತೆಗೆ ಕುಟುಂಬದ ಆಸ್ತಿಗಳನ್ನು ವಿಭಾಗ ಮಾಡಿಕೊಂಡಿರುವ ಬಗ್ಗೆ ವಿಭಾಗ ಪತ್ರವನ್ನು ಹಾಜರುಪಡಿಸಲು ಯಾವುದೇ ತೊಂದರೆ ಇರುವುದಿಲ್ಲ. ದಾವಾ ಆಸ್ತಿಯ ಖಾತೆ ನಂಬರ್ ನನಗೆ ನೆನಪಿಲ್ಲ. ವಾದಿಯು ದಾವೆಯನ್ನು ಯಾವ ಉದ್ದೇಶಕ್ಕಾಗಿ ಸಲ್ಲಿಸಿದ್ದಾರೆ ಎಂದು ನನಗೆ ಗೊತ್ತಿಲ್ಲ. ದಾವಾ ಆಸ್ತಿಗೆ ಸಂಬಂಧಪಟ್ಟಂತೆ ಖಾತೆ, ಪಹಣಿ ಮತ್ತು ಋಣಭಾರ ರಹಿತ ಪತ್ರಗಳನ್ನು ನಾನು ನೋಡಿರುವುದಿಲ್ಲ. ದಾವಾ ಆಸ್ತಿಯ ಖಾತೆ ಮತ್ತು ಪಹಣಿ ಪ್ರತಿವಾದಿಯ ಹೆಸರಿನಲ್ಲಿದೆ ಎಂದರೆ ನನಗೆ ಗೊತ್ತಿಲ್ಲ. ಪ್ರತಿವಾದಿಯೇ ದಾವಾ ಆಸ್ತಿಯ ಮಾಲೀಕರಾಗಿ ಸ್ವಾಧೀನಾನುಭದಲ್ಲಿದ್ದರೂ ಸಹ ವಾದಿಯ ಮಾತುಕೇಳಿಕೊಂಡು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.